## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2021-22ನೇ ಸಾಲಿನ ಆಯವ್ಯಯ ಕಂಡಿಕೆ 140ರಂತೆ 4 ಕಂದಾಯ ವಿಭಾಗಗಳಲ್ಲಿ ತಲಾ ಒಂದು ಮೊರಾರ್ಜಿ ದೇಸಾಯಿ ವಸತಿ ಶಾಲೆಯನ್ನು ಕ್ರೀಡಾ ವಸತಿ ಶಾಲೆಯನ್ನಾಗಿ ಉನ್ನತೀಕರಿಸುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ಸಕಇ 96 ಮೊದೇಶಾ 2021, ಬೆಂಗಳೂರು, ದಿನಾಂಕ:07.06.2021.
2. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಇವರ ಪತ್ರ ಸಂಖ್ಯೆ: ಕವಶಿಸಸ/ ಶಿಕ್ಷಣ / ಸಿಆರ್-68/ 2020-2021, ದಿನಾಂಕ:08-10-2021.

******

**ಪ್ರಸ್ತಾವನೆ:**

ಮೇಲೆ ಕ್ರಮಾಂಕ (1) ರಲ್ಲಿ ಓದಲಾದ ದಿನಾಂಕ:07.06.2021ರ ಆದೇಶದಲ್ಲಿ 2021-22ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ 140ರಂತೆ ಪ್ರತಿ ಕಂದಾಯ ವಿಭಾಗದಲ್ಲಿ ಮೂಲಭೂತ ಸೌಕರ್ಯಗಳುಳ್ಳ ಸೂಕ್ತವಾದ ಒಂದು ವಸತಿ ಶಾಲೆಯಂತೆ, ನಾಲ್ಕು ವಸತಿ ಶಾಲೆಗಳನ್ನು ಕ್ರೀಡಾ ವಸತಿ ಶಾಲೆಯನ್ನಾಗಿ ಉನ್ನತೀಕರಿಸಿ ಆದೇಶಿಸಲಾಗಿತ್ತು.

ಮೇಲೆ ಕ್ರಮಾಂಕ (2) ರಲ್ಲಿ ಓದಲಾದ ದಿನಾಂಕ: 08-10-2021ರ ಪತ್ರದಲ್ಲಿ ಆದೇಶದಲ್ಲಿ ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಇವರು 2020-21ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ 140ರಲ್ಲಿ ಘೋಷಿಸಿರುವಂತೆ ನಾಲ್ಕು ಕಂದಾಯ ವಿಭಾಗಗಳಲ್ಲಿ ತಲಾ ಒಂದು ಮೊರಾರ್ಜಿ ವಸತಿ ಶಾಲೆಗಳನ್ನು ಅದ್ವಿತೀಯ ಕ್ರೀಡಾ ವಸತಿ ಶಾಲೆಯನ್ನಾಗಿ ಉನ್ನತೀಕರಿಸಲು ದಿನಾಂಕ:07-06-2021 ರ ಆದೇಶ ಹೊರಡಿಸಲಾಗಿದೆ. ಈ ಸಂಬಂಧ ಅಧೀಕ್ಷಕರ ಅಭಿಯಂತರರ ನೇತೃತ್ವದ ತಾಂತ್ರಿಕ ಶಾಖೆಯ ಅಧಿಕಾರಿಗಳು ವಸತಿ ಶಾಲೆಗಳನ್ನು ಪರಿಶೀಲಿಸಿ ಜಿಲ್ಲಾ ಕೇಂದ್ರಕ್ಕೆ ಸಮೀಪವಿರುವ ಕ್ರೀಡೆಗೆ ಯೋಗ್ಯವಿರುವ ಮೂಲಭೂತ ಸೌಕರ್ಯಗಳನ್ನು ಒಳಗೊಂಡ ವಿಸ್ತಾರವಾದ ಜಮೀನು ಹೊಂದಿರುವ ಪ್ರತಿ ಕಂದಾಯ ವಿಭಾಗಕ್ಕೆ 4 ರಿಂದ 5 ವಸತಿ ಶಾಲೆಗಳನ್ನು ಗುರುತಿಸಿ ಸಲ್ಲಿಸಿರುತ್ತಾರೆ. ಸದರಿ ವಸತಿ ಶಾಲೆಗಳಲ್ಲಿ ನೀರಿನ ಸೌಲಭ್ಯ, ಜಮೀನಿನ ಸ್ಥಿತಿ, ಉಷ್ಣಾಂಶ ಮತ್ತು ಕಾಂಪೌಂಡ್ ನಿರ್ಮಾಣವಾಗಿರುವ ಬಗ್ಗೆ ವಿವರಗಳನ್ನು (ಪುಟ:23-26) ಸಲ್ಲಿಸಿರುತ್ತಾರೆ. ಈ ವಸತಿ ವಸತಿ ಶಾಲೆಗಳ ಪೈಕಿ ಪ್ರತಿ ಕಂದಾಯ ವಿಭಾಗಕ್ಕೆ ಒಂದು ಮೊರಾರ್ಜಿ ದೇಸಾಯಿ ವಸತಿ ಶಾಲೆಯನ್ನು ಆಯ್ಕೆ ಮಾಡಿ ಅದ್ವಿತೀಯ ಕ್ರೀಡಾ ವಸತಿ ಶಾಲೆಯನ್ನಾಗಿ ಉನ್ನತೀಕರಿಸಲು ಸರ್ಕಾರದ ಆದೇಶ ಹೊರಡಿಸಲು ಕೋರಿರುತ್ತಾರೆ.

ಮೇಲ್ಕಂಡ ಅಂಶಗಳನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಕಇ 96 ಮೊದೇಶಾ 2021, ಬೆಂಗಳೂರು, ದಿನಾಂಕ:30.11.2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯ ಪ್ರತಿ ಕಂದಾಯ ವಿಭಾಗಕ್ಕೆ ಒಂದರಂತೆ ಈ ಕೆಳಕಂಡ ನಾಲ್ಕು ವಸತಿ ಶಾಲೆಗಳನ್ನು ಕ್ರೀಡಾ ವಸತಿ ಶಾಲೆಯನ್ನಾಗಿ ಉನ್ನತೀಕರಿಸಿ ಆದೇಶಿಸಿದೆ.

| ಕ್ರ.ಸಂ | ಕಂದಾಯ ವಿಭಾಗ | ಜಿಲ್ಲೆ | ತಾಲ್ಲೂಕು | ಶಾಲೆ ಹೆಸರು |
|---|---|---|---|---|
| 1 | ಬೆಂಗಳೂರು | ಚಿತ್ರದುರ್ಗ | ಹೊಳಲ್ಕೆರೆ | ಮೊರಾರ್ಜಿ ದೇಸಾಯಿ ವಸತಿ ಶಾಲೆ, ಚಿತ್ರಹಳ್ಳಿ |
| 2 | ಮೈಸೂರು | ದಕ್ಷಿಣ ಕನ್ನಡ | ಬೆಳ್ತಂಗಡಿ | ಮೊರಾರ್ಜಿ ದೇಸಾಯಿ ವಸತಿ ಶಾಲೆ, ಮುಂಡಾಜೆ |
| 3 | ಬೆಳಗಾವಿ | ಧಾರವಾಡ | ಧಾರವಾಡ | ಮೊರಾರ್ಜಿ ದೇಸಾಯಿ ವಸತಿ ಶಾಲೆ, ಹೆಬ್ಬಳ್ಳಿ |
| 4 | ಕಲಬುರಗಿ | ರಾಯಚೂರು | ರಾಯಚೂರು | ಮೊರಾರ್ಜಿ ದೇಸಾಯಿ ವಸತಿ ಶಾಲೆ, ರಾಯಚೂರು. |

ಉಳಿದಂತೆ, ಸರ್ಕಾರದ ಆದೇಶ ಸಂಖ್ಯೆ: ಸಕಇ 96 ಮೊದೇಶಾ 2021, ದಿನಾಂಕ:07.06.2021 ರಲ್ಲಿನ ವಿದ್ಯಾರ್ಥಿಗಳ ಆಯ್ಕೆ, ಆಯ್ಕೆ ಸಮಿತಿ, ಕ್ರೀಡಾ ವಸತಿ ಶಾಲೆಗಳ ನಿರ್ವಹಣೆ ಮತ್ತು ಬೋಧನೆ ಹಾಗೂ ತರಬೇತಿ ವಿವರಗಳಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

30/11/2021

(ಪಿ.ಎನ್.ನಾಗರಾಜ್)
ಸರ್ಕಾರದ ಅಧೀನ ಕಾರ್ಯದರ್ಶಿ-3
ಸಮಾಜ ಕಲ್ಯಾಣ ಇಲಾಖೆ.

ಇವರಿಗೆ,

1. ಮಹಾಲೇಖಪಾಲರು, (ಲೆಕ್ಕಪತ್ರ/ಲೆಕ್ಕ ಪರಿಶೋಧನೆ) ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
3. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
4. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು.
5. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು.

6. ಜಂಟಿ ನಿರ್ದೇಶಕರು ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಮಾಹಿತಿ ವಿಭಾಗ (ಪಿಎಂಐ) ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿಗಳ ಕಟ್ಟಡ.
7. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-3&9) ವಿಧಾನಸೌಧ.
8. ಶಾಖಾ ರಕ್ಷಾ ಕಡತ /ಹೆಚ್ಚುವರಿ ಪ್ರತಿಗಳು.

ಪ್ರತಿ ಮಾಹಿತಿಗಾಗಿ:-

1. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಅಪರಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ.
3. ಸರ್ಕಾರದ ಉಪ ಕಾರ್ಯದರ್ಶಿ 2, ಇವರ ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ.